1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮದ 49ನೇ ಕಲಮಿನ ಮೇರೆಗೆ:

6) 1994-95ನೇ ಸಾಲಿನ ಹಾಸನ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿ:

7) 1994-95ನೇ ಸಾಲಿನ ವಿಜಾಪುರ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿ:

8) 1994-95 ನೇ ಸಾಲಿನ ಶಿವಮೆಗ್ಗ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿ;

9) 1986-87 ಹಾಗೂ 1987-88ನೇ ಸಾಲುಗಳ ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರದ ವಾರ್ಷಿಕ ವರದಿಗಳು;

1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮದ 25ನೇ ಕಲಮಿನ ಮೇರೆಗೆ:

10) 1994-95 ನೇ ಸಾಲಿನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಕೃಷ್ಣಾ ಮೇಲ್ದಂಡೆ ಯೋಜನೆಯ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :

IV. ಶ್ರೀಸಿ. ಬೈರೇಗೌಡ (ಕೃಷಿ ಮಂತ್ರಿ)ರವರ ಪರವಾಗಿ :

1956ರ ಕಂಪನಿಗಳ ಕಾಯ್ದೆಯ 619ಎ ಕಲಮಿನ ಮೇರೆಗೆ :

1) 1992-93ನೇ ಸಾಲಿನ ಕರ್ನಾಟಕ ರಾಜ್ಯ ಅಗ್ರೋ ಕಾರ್ನ್ ಪ್ರಾಡಕ್ಟ್ಸ್ ನಿಯಮಿತದ 20ನೇ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

1963ರ ಕೃಷಿ ವಿಶ್ವವಿದ್ಯಾನಿಲಯಗಳ ಅಧಿನಿಯಮದ 38(3)ನೇ ಕಲಮಿನ ಮೇರೆಗೆ;

2) 1991-91ನೇ ಸಾಲಿನ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಲೆಕ್ಕಪರಿಶೋಧನಾ ವರದಿಗೆ ಅನುಸರಣಾ ವರದಿಗಳನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಸಭೆಯ ಮುಂದೆ ಮಂಡಿಸಲಾಯಿತು.

ಅರ್ಜಿಗಳನ್ನೊಪ್ಪಿಸುವುದು

ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಅಧ್ಯಕ್ಷರೆ, ತುಮಕೂರು ಜಿಲ್ಲೆ ಸಿರಾ ತಾಲೂಕು ಸೀಬಿ ಅಗ್ರಹಾರ ಮತ್ತು ಸೀಬೆ ಗ್ರಾಮ ಪಂಚಾಯ್ತಿಗೆ ಸೇರಿದ ಹಳ್ಳಿಗಳಲ್ಲಿ ಸಾರಾಯಿ ಅಂಗಡಿಗಳಿಗೆ 1995ನೇ ಸಾಲಿನಿಂದ ಹೊಸದಾಗಿ ಪರವಾನಗಿ ಮತ್ತು ನವೀಕರಣವನ್ನು ರದ್ದುಗೊಳಿಸುವ ಬಗ್ಗೆ ಅರ್ಜಿಯನ್ನು ಸದನದ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಅರ್ಜಿಯನ್ನು ಮಂಡಿಸಲಾಯಿತು.

Sri Qumural Islam (Gulbarga) : Sir, I present the petition to consider the unaided teachers working in the additional sections of the Governemnt aided private Primary Schools as aided teachers, and release of salaries.

Mr. Speaker : Petition presented.

ಅಧ್ಯಕ್ಷರ ಸೂಚನೆ :